# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1783 (2019)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಕಂದಾಯ ಸಚಿವರು

ವಿಷಯ : ಭೂ ಪರಿವರ್ತನೆಗೆ ತೊಂದರೆಯಾಗುತ್ತಿರುವ ಬಗ್ಗೆ

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಳೆದ 3 ವರ್ಷಗಳಲ್ಲಿ ಭೂ ಪರಿವರ್ತನೆಗಾಗಿ ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ; ಯಾವ ಯಾವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ ; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು ; (ಪ್ರಕರಣವಾರು ವಿವರ ಒದಗಿಸುವುದು)

(ಆ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಳೆದ 3 ವರ್ಷಗಳಲ್ಲಿ ಕೈಗಾರಿಕೆಯನ್ನು ಸ್ಥಾಪಿಸುವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು ; (ವಿವರವನ್ನು ಪ್ರಕರಣವಾರು ಒದಗಿಸುವುದು)

(ಇ) ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು)

(ಈ) ಕರ್ನಾಟಕ ಭೂ ಕಂದಾಯ ಅಧಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ ; ಹಾಗಿದ್ದಲ್ಲಿ, ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು ;

(ಉ) ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು? (ವಿವರ ನೀಡುವುದು)